# ಕರ್ನಾಟಕ ವಿಧಾನ ಪರಿಷತ್ತು

ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿನ ತುರ್ತು ಚಿಕಿತ್ಸಾ ಘಟಕ ಮತ್ತು ತೀವ್ರನಿಗಾ ಘಟಕಗಳಲ್ಲಿ **Ventilators, HFNC, ALL Monitors and Narcotic Drugs, Emergency Drugs** ಗಳನ್ನು ನಿರ್ವಹಿಸಲು ಅರ್ಹ, ನುರಿತ ತಂತ್ರಜ್ಞರು ಇಲ್ಲದೇ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳ ಸಾವು–ನೋವುಗಳು ಹೆಚ್ಚಾಗಿರುವ ಕಾರಣ ಬಡರೋಗಿಗಳು ಖಾಸಗಿ ಆಸ್ಪತ್ರೆಗಳಿಗೆ ದಾಖಲಾಗಲು ಹಣವಿಲ್ಲದೆ, ಸರ್ಕಾರಿ ಆಸ್ಪತ್ರೆಗಳಿಗೆ ದಾಖಲಾಗಲು ಭಯಭೀತರಾಗಿ ಮನೆಯಲ್ಲಿಯೇ/ಮಾರ್ಗಮಧ್ಯದಲ್ಲಿಯೇ ಉಸಿರನ್ನು ನಿಲ್ಲಿಸುತ್ತಿರುವುದು ಸರ್ವೇ ಸಾಮಾನ್ಯವಾಗಿದೆ. ಈ ಸಮಸ್ಯೆಯನ್ನು ನಿವಾರಿಸುವ ನಿಟ್ಟಿನಲ್ಲಿ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸಿನಲ್ಲಿರುವಂತೆ, ಡಿಪ್ಲೊಮ, ಬ್ಯಾಚುಲರ್ ಮತ್ತು ಮಾಸ್ಟರ್ ಪದವಿ ಹೊಂದಿರುವವರನ್ನು ಸರ್ಕಾರಿ ಆಸ್ಪತ್ರೆಗಳಲ್ಲಿನ ತುರ್ತು ಚಿಕಿತ್ಸಾ ಘಟಕ ಮತ್ತು ತೀವ್ರನಿಗಾ ಘಟಕಗಳಿಗೆ ನೇಮಕ ಮಾಡುವ ವಿಚಾರವು ಸಾರ್ವಜನಿಕವಾಗಿ ಮಹತ್ವವಾಗಿರುವುದಾಗಿ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ಆರ್. ಪಾಟೀಲ್ ರವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಹೇಳಿಕೆ;

*****

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಓ.ಟಿ. ಟೆಕ್ನೀಷಿಯನ್ ಹುದ್ದೆಗಳು ಮಂಜೂರಾಗಿರುವುದಿಲ್ಲ. ಹೀಗಾಗಿ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಸಹಾಯಕ ಹುದ್ದೆಗೆ ಇದುವರೆಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿರುವುದಿಲ್ಲ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿನ ತುರ್ತು ಚಿಕಿತ್ಸಾ ಘಟಕ ಮತ್ತು ತೀವ್ರ ನಿಗಾ ಘಟಕಗಳಲ್ಲಿ ಇಲಾಖೆಯಲ್ಲಿ ಇತರೆ ವೃಂದಗಳ ನುರಿತ ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ.

ಮುಂದುವರೆದು, ರಾಜ್ಯಾದ್ಯಂತ ಎಲ್ಲಾ ಆಸ್ಪತ್ರೆಗಳ ಶಸ್ತ್ರಚಿಕಿತ್ಸೆ ಕೊಠಡಿಗಳಲ್ಲಿ ಆಧುನಿಕ ಯಂತ್ರೋಪಕರಣಗಳನ್ನು ಅಳವಡಿಸಲಾಗುತ್ತಿರುವುದರಿಂದ ಪ್ರತಿ ಮೇಜರ್ ಆಪರೇಷನ್ ಥಿಯೇಟರ್‌ಗೆ 2 ತಾಂತ್ರಿಕ ಸಹಾಯಕರುಗಳಂತೆ 822 ಹಾಗೂ ಪ್ರತಿ ಮೈನರ್ ಆಪರೇಷನ್ ಥಿಯೇಟರ್‌ಗೆ 1 ತಾಂತ್ರಿಕ ಸಹಾಯಕರಂತೆ 378 ಸೇರಿ ಒಟ್ಟು 1224 ಓ.ಟಿ. ಟೆಕ್ನೀಷಿಯನ್ ಹುದ್ದೆಗಳನ್ನು ಇಲಾಖೆಯಲ್ಲಿ ಸೃಜನೆ ಮಾಡಿಕೊಳ್ಳಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗಿತ್ತು. ಆದರೆ, ಪ್ರಸ್ತುತ ಇರುವ ಆರ್ಥಿಕ ನಿಬಂಧನೆಗಳ ಹಿನ್ನೆಲೆಯಲ್ಲಿ ಹೊಸದಾಗಿ ಆಪರೇಷನ್ ಥಿಯೇಟರ್ ಟೆಕ್ನೀಷಿಯನ್ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

ಹೀಗಾಗಿ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಸಹಾಯಕ ಹುದ್ದೆಯು ಇಲಾಖೆಯಲ್ಲಿ ಸೃಜನೆಯಾಗಿಲ್ಲದ ಪ್ರಯುಕ್ತ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸ್‌ನಲ್ಲಿರುವಂತೆ ಡಿಪ್ಲೊಮ, ಬ್ಯಾಚುಲರ್ ಮತ್ತು ಮಾಸ್ಟರ್ ಪದವಿ ಹೊಂದಿರುವವರನ್ನು ಸರ್ಕಾರಿ ಆಸ್ಪತ್ರೆಗಳಲ್ಲಿನ ತುರ್ತು ಚಿಕಿತ್ಸಾ ಘಟಕ ಮತ್ತು ತೀವ್ರ ನಿಗಾ ಘಟಕಗಳಿಗೆ ನೇಮಕ ಮಾಡಿಕೊಳ್ಳಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

(ಡಾ. ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು

ಸಂಖ್ಯೆ: ಆಕುಕ 367 ಹೆಚ್‌ಎಸ್‌ಎಂ 2021